ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಅರಮನೆ ರಸ್ತೆ, ಬೆಂಗಳೂರು-560001.

ಸಂಖ್ಯೆ: ಕಾಶಿಇ:ಶೈವಿ:44:ಸ್ವಾ.ಅ.ಮ:2022-23 ದಿನಾಂಕ:03.08.2022.

**ಸುತ್ತೋಲೆ**

ವಿಷಯ: "ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ" ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ವ್ಯಾಪಕ ಪ್ರಚಾರ ಪಡಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 229 ಬಿಎಂಎಸ್ 2022 ಬೆಂಗಳೂರು ದಿನಾಂಕ:13.04.2022.
2. ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಉತ್ತರ ಜಿಲ್ಲೆ, ಬೆಂಗಳೂರು, ರವರ ಪತ್ರ ಸಂಖ್ಯೆ:ದೇಹಿನಿ/ಸ/ಅ.ಮ/ಸಿ.ಆರ್-01/2022-23 ದಿ:13.07.2022.
3. ಜಿಲ್ಲಾ ವ್ಯವಸ್ಥಾಪಕರು, ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ರವರ ಪತ್ರ ಸಂಖ್ಯೆ:ದೇಹಿನಿ/ಜಿವ್ಯ/ ಬೆ.ಉ/ಅ.ಮ/ಸಿಆರ್-27/2022-23 ದಿನಾಂಕ:21.07.2022.

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ಮುಖ್ಯಮಂತ್ರಿಗಳು 2022-23ನೇ ಸಾಲಿನ ಆಯವ್ಯಯ ಭಾಷಣ "ಕಂಡಿಕೆ 177"ರಲ್ಲಿ ಹಿಂದುಳಿದ ವರ್ಗಗಳ ಸುಮಾರು 25000 ಯುವಜನರಿಗೆ ಕೌಶಲ್ಯಾಭಿವೃದ್ಧಿಪಡಿಸಿ ಉದ್ಯೋಗಮುಖಿಯನ್ನಾಗಿಸಲು ಸರ್ಕಾರದ ಸಂಸ್ಥೆಗಳಾದ **ITIs, GTTC, KGTTI** ರಲ್ಲಿ ಅಲ್ಪಾವಧಿ ಕೋರ್ಸ್‌ಗಳ ಮೂಲಕ ಕೌಶಲ್ಯ ತರಬೇತಿ ನೀಡಲು ಅಮೃತ ಮುನ್ನಡೆ ಎಂಬ ಹೊಸ ಯೋಜನೆಯನ್ನು ಘೋಷಿಸಲಾಗಿದೆ. ಈ ಯೋಜನೆಯಡಿ ಅರ್ಜಿದಾರರು 88 ವಿವಿಧ ಅಲ್ಪಾವಧಿ ತರಬೇತಿಯ ಕೋರ್ಸ್‌ಗಳಿಗೆ www.kaushalkar.com ವೆಬ್‌ಸೈಟ್‌ನಲ್ಲಿ **"ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ನೋಂದಣಿ"** ಕೋಶದಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿಕೊಡಲಾಗಿದೆ. ಉಲ್ಲೇಖ (1)ರ ಸರ್ಕಾರದ ಆದೇಶದನ್ವಯ ಸದರಿ ಯೋಜನೆಯ ಅನುಷ್ಠಾನಕ್ಕೆ ಉಲ್ಲೇಖ (2)ರಲ್ಲಿ ನಿಗಮದ ಕೇಂದ್ರ ಕಛೇರಿಯ ಪತ್ರಿಕಾ ಪ್ರಕಟಣೆಯನ್ನು ದಿನಾಂಕ:13.07.2022 ರಂದು ಹೊರಡಿಸಲಾಗಿರುತ್ತದೆ.

ಆದುದರಿಂದ, ಬೆಂಗಳೂರು ನಗರ ವ್ಯಾಪ್ತಿಗೊಳಪಡುವ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಸದರಿ ಯೋಜನೆಯನ್ನು ಸದುಪಯೋಗಪಡಿಸಿಕೊಳ್ಳಲು ನಿಗಧಿಪಡಿಸಿರುವ ದಿನಾಂಕದೊಳಗೆ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿ ನೋಂದಣಿ ಮಾಡಿಸಲು ಕಾಲೇಜಿನ ಸೂಚನಾ ಫಲಕದಲ್ಲಿ ಪ್ರಕಟಿಸುವಂತೆ ಹಾಗೂ ಅಗತ್ಯ ಕ್ರಮವಹಿಸುವಂತೆ ಸೂಚಿಸಲಾಗಿದೆ.

ಲಗತ್ತು: ಪತ್ರಿಕಾ ಪ್ರಕಟಣೆ

ಕಾಲೇಜು ಶಿಕ್ಷಣ ನಿರ್ದೇಶಕರು

<u>ಇವರಿಗೆ:</u> ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
1. ಬೆಂಗಳೂರು ನಗರ ವ್ಯಾಪ್ತಿಯ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ .
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಕಾಳಿದಾಸ ರಸ್ತೆ, ಬೆಂಗಳೂರು.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.

ಕಛೇರಿ ಪ್ರತಿ.

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ

ದೇವರಾಜ ಅರಸು ಭವನ, 4ನೇ ಮಹಡಿ, ನಂ.16ಡಿ, ಮಿಲ್ಲರ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು-52

ಸಂಖ್ಯೆ: ದೇಹಿನಿ/ಸ/ಅ.ಮ/ಸಿ.ಆರ್-01/2022-23 ದಿನಾಂಕ:13-07-2022

## ಪ್ರಕಟಣೆ

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 2022-23ನೇ ಸಾಲಿಗೆ ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆಯಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

*ಕೌಶಲ್ಯ ಕರ್ನಾಟಕ ತಂತ್ರಾಂಶದ ಮುಖಾಂತರ ಆನ್‌ಲೈನ್ ಅರ್ಜಿ ಸ್ವೀಕೃತಿ*

### ❖ ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆ

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮ, ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ, ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮ, ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ, ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ಹಾಗೂ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮಗಳ ವ್ಯಾಪ್ತಿಗೆ ಒಳಪಡುವ (ಒಕ್ಕಲಿಗ, ಲಿಂಗಾಯತ, ಕಾಡುಗೊಲ್ಲ, ಹಟ್ಟಿಗೊಲ್ಲ ಮತ್ತು ಮರಾಠ ನಿಗಮಗಳಡಿಯಲ್ಲಿ ಬರುವ ಸಮುದಾಯಗಳನ್ನು ಹೊರತುಪಡಿಸಿ) ಹಿಂದುಳಿದ ವರ್ಗಗಳ ಯುವ ಜನರಿಗೆ ಕೌಶಲ್ಯ ಅಭಿವೃದ್ಧಿಪಡಿಸಿ ಉದ್ಯೋಗಮುಖಿಯನ್ನಾಗಿಸಲು ಸರ್ಕಾರದ ಸಂಸ್ಥೆಗಳಾದ ITIs, GTTC, KGTTI ಗಳಲ್ಲಿ ಅಲ್ಪಾವಧಿ ಕೋರ್ಸುಗಳ ಮೂಲಕ ಕೌಶಲ್ಯ ತರಬೇತಿ ನೀಡಲು ಕೌಶಲ್ಯ ಕರ್ನಾಟಕ ತಂತ್ರಾಂಶದ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹತೆಗಳು: 10ನೇ ತರಗತಿ/ದ್ವಿತೀಯ ಪಿ.ಯು.ಸಿ./ಡಿಪ್ಲೋಮಾ/ಪದವಿ/ಇಂಜಿನಿಯರಿಂಗ್ ವ್ಯಾಸಂಗವನ್ನು ಪೂರ್ಣಗೊಳಿಸಿರಬೇಕು, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾತಿ ಪಟ್ಟಿಯಲ್ಲಿ ನಮೂದಿಸಿದ ಮೇಲ್ಕಂಡ ನಿಗಮಗಳ ವ್ಯಾಪ್ತಿಗೆ ಒಳಪಡುವ ಜಾತಿಗಳಿಗೆ ಸೇರಿದವರಾಗಿರಬೇಕು. ಅರ್ಜಿದಾರರ ವಯಸ್ಸು 18 ರಿಂದ 25 ವರ್ಷಗಳ ಒಳಗಿರಬೇಕು. ಪ್ರವರ್ಗ-1ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಕುಟುಂಬದ ವಾರ್ಷಿಕ ವರಮಾನ/ಆದಾಯ ಮಿತಿ ಇರುವುದಿಲ್ಲ. ಪ್ರವರ್ಗ-2ಎ,3ಎ ಮತ್ತು 3ಬಿಗೆ ಸೇರಿದ ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ/ಆದಾಯ ರೂ.8.00 ಲಕ್ಷಗಳಿಗಿಂತ ಕಡಿಮೆ ಇರಬೇಕು.

ಅರ್ಜಿದಾರರು https://www.kaushalkar.com/ ಜಾಲತಾಣದೊಂದಿಗೆ ಅರ್ಜಿಯನ್ನು ಸಲ್ಲಿಸಬಹುದು ಅಥವಾ ಮೇಲ್ಕಂಡ ನಿಗಮಗಳ ಈ ಕೆಳಕಂಡ ವೆಬ್‌ಸೈಟ್‌ಗಳನ್ನು ಸಂಪರ್ಕಿಸುವುದು.

https://www.dbcdc.karnataka.gov.in, (ಡಿ.ದೇವರಾಜ ಅರಸು ಅಭಿವೃದ್ಧಿ ನಿಗಮ)

https://kaad.karnataka.gov.in, (ಅಲೆಮಾರಿ ಅಭಿವೃದ್ಧಿ ನಿಗಮ)

https://kssd.karnataka.gov.in, (ಸವಿತಾ ಸಮಾಜ ಅಭಿವೃದ್ಧಿ ನಿಗಮ

https://kmmd.karnataka.gov.in (ಮಡಿವಾಳ ಅಭಿವೃದ್ಧಿ ನಿಗಮ)

https://uppardevelopment.karnataka.gov.in (ಉಪ್ಪಾರ ಅಭಿವೃದ್ಧಿ ನಿಗಮ )

https://kvcdcl.karnataka.gov.in (ವಿಶ್ವಕರ್ಮ ಅಭಿವೃದ್ಧಿ ನಿಗಮ)

https://ambigaradevelopment.karnataka.gov.in (ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ)

ಹೆಚ್ಚಿನ ಮಾಹಿತಿಗಾಗಿ ನಿಗಮದ ಕೇಂದ್ರ ಕಛೇರಿಯ ದೂರವಾಣಿ/ಸಹಾಯವಾಣಿ ಸಂಖ್ಯೆ: 080-22374832, 9606066389 ಮತ್ತು 8824300400 ಅಥವಾ ಆಯಾ ಜಿಲ್ಲಾ ಕಛೇರಿಯ ದೂರವಾಣಿ ಸಂಖ್ಯೆಗಳನ್ನು ವೆಬ್‌ಸೈಟ್‌ನಲ್ಲಿ ನೀಡಲಾಗಿರುತ್ತದೆ. ಆನ್‌ಲೈನ್ ಮೂಲಕ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲೆಗಳೊಂದಿಗೆ ದಿನಾಂಕ: 14-07-2022 ರಿಂದ ದಿನಾಂಕ: 29-08-2022ರೊಳಗೆ ಸಲ್ಲಿಸಲು ಅವಕಾಶವಿರುತ್ತದೆ.

ಸೂಚನೆ: ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಯಾವುದೇ ಶುಲ್ಕ ಪಾವತಿಸುವಂತಿಲ್ಲ. ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾ ವ್ಯವಸ್ಥಾಪಕರ ಕಛೇರಿ, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಕಛೇರಿಯ ಆವರಣದಲ್ಲಿ ಉಚಿತವಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ವ್ಯವಸ್ಥೆ ಇರುತ್ತದೆ.

(ವಿ.ರವಿ)
ವ್ಯವಸ್ಥಾಪಕ ನಿರ್ದೇಶಕರು.